**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

DTE-ADMI0ACM2/99/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:19-08-2021.

**-:: ಪ್ರವೇಶಾಧಿಸೂಚನೆ ::-**

**ವಿಷಯ:** ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್(ಅನುದಾನಿತ), ಮೈಸೂರು ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ವಿಶೇಷಚೇತನರ (ಅಂಗವಿಕಲ) ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

**ಉಲ್ಲೇಖ:** ಪ್ರಾಂಶುಪಾಲರು, ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಮೈಸೂರು ಇವರ ಪತ್ರ ಸಂ. ಜೆಎಸ್‌ಎಸ್ ವಿ.ಪಾ/06 ಎಸಿಎಂ/2021-22/204, ದಿ:10/18-08-2021.

-00000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನ ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್(ಅನುದಾನಿತ), ಮೈಸೂರು ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಕೋರ್ಸುಗಳಿಗೆ **Orthopedically Handicapped, Hearing Impaired & Visually Impaired** ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವಿಶೇಷಚೇತನರ (ಅಂಗವಿಕಲ) ಅಭ್ಯರ್ಥಿಗಳ ಪ್ರವೇಶಕ್ಕೆ ಅವಕಾಶವಿರುತ್ತದೆ. ಉಲ್ಲೇಖಿತ ಪತ್ರದಲ್ಲಿ ಪ್ರಾಂಶುಪಾಲರು ಕೋರಿರುವಂತೆ.

**2021-22ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ವಿಶೇಷಚೇತನರ (ಅಂಗವಿಕಲ) ಅಭ್ಯರ್ಥಿಗಳಿಂದ ಅರ್ಜಿಗಳ ವಿತರಣೆ ಹಾಗೂ ಸ್ವೀಕರಿಸುವ ಅಂತಿಮ ದಿ:31-08-2021 ಎಂದು ನಿಗಧಿಪಡಿಸಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ OFF-LINE ಮೂಲಕ ಪೂರ್ಣಗೊಳಿಸಲು ಸೂಚಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಪ್ರವೇಶಾತಿ ಸಂದರ್ಭದಲ್ಲಿ ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ಕೈಗಳನ್ನು ಸ್ಯಾನಿಟೈಸರ್‌ನಿಂದ ಸ್ವಚ್ಛಗೊಳಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ ಹಾಗೂ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ. 0821-2548315, Email: jsspda@gmail.com / mailme@jsspda.org & ವೆಬ್‌ಸೈಟ್ : www.jsspda.org ನ್ನು ಸಂಪರ್ಕಿಸುವುದು.**

for **ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

*ಗೆ, ಪ್ರಿನ್ಸಿಪಾಲರು, ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್(ಅನುದಾನಿತ), ಮೈಸೂರು.*

**ಪ್ರತಿ ಮಾಹಿತಿಗಾಗಿ:-**

1. ಆಯುಕ್ತರ ಆಪ್ತಶಾಖೆಗೆ.
2. ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಇ-ಆಡಳಿತ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಅಂತರ್ಜಾಲದಲ್ಲಿ ಪ್ರಕಟಿಸುವುದು.
8. ಡಿಪಿ(2) ವಿಭಾಗಕ್ಕೆ - ಮಾಹಿತಿಗಾಗಿ 9.ಕಛೇರಿ ಪ್ರತಿ.

Scanned with CamScanner